**National**
**Kannada**
**29.07.2026 19.35 hrs**
**ಆಕಾಶವಾಣಿ, ಬೆಂಗಳೂರು**

# ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಲೋಕಸಭೆಯಲ್ಲಿಂದು ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆಗಟ್ಟುವಿಕೆ ತಿದ್ದುಪಡಿ ಮಸೂದೆ– 2026 ಅಂಗೀಕಾರ
2. ರಾಷ್ಟ್ರೀಯ ಗೌರವಕ್ಕೆ ಅವಮಾನ ತಡೆಗಟ್ಟುವಿಕೆ ತಿದ್ದುಪಡಿ ಮಸೂದೆ –2026ಕ್ಕೆ ರಾಜ್ಯಸಭೆ ಅಂಕಿತ
3. ಹಾರ್ಮುಜ್ ಜಲಸಂಧಿಯಲ್ಲಿ ಹಡಗುಗಳ ಮೇಲೆ ದಾಳಿ; ಭಾರತ ಖಂಡನೆ
4. ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಮೃತಪಟ್ಟ ಪ್ರತಿಭಟನಾಕಾರರ ಸಂಖ್ಯೆ 40ಕ್ಕೆ ಏರಿಕೆ – ವಿಶ್ವಸಂಸ್ಥೆ ಮಧ್ಯಪ್ರವೇಶ

---

ಲೋಕಸಭೆ ಇಂದು ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆಗಟ್ಟುವಿಕೆ ತಿದ್ದುಪಡಿ ಮಸೂದೆ, 2026 ಅನ್ನು ಅಂಗೀಕರಿಸಿತು. ಈ ಮಸೂದೆಯು ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆಗಟ್ಟುವಿಕೆ ತಿದ್ದುಪಡಿ ಕಾಯ್ದೆ, 2024 ಅನ್ನು ತಿದ್ದುಪಡಿ ಮಾಡಲು ಉದ್ದೇಶಿಸಿದೆ.

ಹತ್ತು ವರ್ಷಗಳವರೆಗೆ ಜೈಲು ಶಿಕ್ಷೆ, ಹತ್ತು ಕೋಟಿ ರೂಪಾಯಿಗಳವರೆಗೆ ದಂಡ ಮತ್ತು ಶಿಕ್ಷೆಗೊಳಗಾದ ಅಪರಾಧಿಗಳ ಆಸ್ತಿಗಳನ್ನು ವಶಪಡಿಸಿಕೊಳ್ಳುವಂತಹ ಕಠಿಣ ದಂಡಗಳು ಸೇರಿದಂತೆ ಹಲವಾರು ಮಹತ್ವದ ನಿಬಂಧನೆಗಳನ್ನು ಈ ಶಾಸನ ಒಳಗೊಂಡಿದೆ. ಪ್ರಕರಣಗಳ ತ್ವರಿತ ವಿಲೇವಾರಿಯನ್ನು ಖಚಿತಪಡಿಸಿಕೊಳ್ಳಲು, ಪ್ರತಿ ರಾಜ್ಯ ಸರ್ಕಾರ ಮತ್ತು ಕೇಂದ್ರಾಡಳಿತ ಪ್ರದೇಶದ ಆಡಳಿತವು ದೈನಂದಿನ ವಿಚಾರಣೆಗಾಗಿ ವಿಶೇಷ ತ್ವರಿತ ನ್ಯಾಯಾಲಯಗಳನ್ನು ಸ್ಥಾಪಿಸುವುದನ್ನು ಶಾಸನ ಕಡ್ಡಾಯಗೊಳಿಸುತ್ತದೆ. ಪೊಲೀಸ್ ಠಾಣೆಯಲ್ಲಿ ಮಾಹಿತಿಯನ್ನು ದಾಖಲಿಸಿದ ದಿನಾಂಕದಿಂದ ಎರಡು ತಿಂಗಳೊಳಗೆ ಅಪರಾಧಗಳ ತನಿಖೆಗಳನ್ನು ಪೂರ್ಣಗೊಳಿಸಬೇಕು. ಆರೋಪಪಟ್ಟಿ ಸಲ್ಲಿಸಿದ ಮೂರು ತಿಂಗಳೊಳಗೆ ವಿಚಾರಣೆಗಳನ್ನು ಮುಕ್ತಾಯಗೊಳಿಸಬೇಕು.

ಮಸೂದೆಯ ಮೇಲಿನ ಚರ್ಚೆಗೆ ಉತ್ತರಿಸಿದ ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದು–ಕೊರತೆಗಳು ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್, ಕಾನೂನನ್ನು ಹೆಚ್ಚು ಕಠಿಣಗೊಳಿಸಲು ಮತ್ತು ತ್ವರಿತ ನ್ಯಾಯವನ್ನು ಖಚಿತಪಡಿಸಿಕೊಳ್ಳಲು ಮಸೂದೆಗೆ ತಿದ್ದುಪಡಿ ತರಲಾಗಿದೆ. ಹೊಸ ಮಸೂದೆಯು ವಿದ್ಯಾರ್ಥಿಗಳು ಮತ್ತು ಯುವಕರ ಕಲ್ಯಾಣವನ್ನು ಕಾಪಾಡುವ ಸರ್ಕಾರದ ಬದ್ಧತೆಯ ಪುನರುಚ್ಚರಿಸುತ್ತದೆ ಎಂದು ಹೇಳಿದರು.

ಒಂದು ಪ್ರಮುಖ ಮಸೂದೆಯ ಬಗ್ಗೆ ಚರ್ಚೆ ನಡೆಯುತ್ತಿರುವಾಗ, ವಿರೋಧ ಪಕ್ಷಗಳು ಸಲಹೆಗಳನ್ನು ನೀಡುವ ಬದಲು ರಾಜಕೀಯ ಮಾಡುತ್ತಿವೆ. ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಅಸಂಸದೀಯ ಭಾಷೆಯನ್ನು ಬಳಸುತ್ತಿದ್ದಾರೆ. ಆದರೆ ಇದು ಸೂಕ್ತವಲ್ಲ, ದುರದೃಷ್ಟಕರ ಎಂದು ಹೇಳಿದರು.

ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ರಾಹುಲ್ ಗಾಂಧಿಯವರ ಆರೋಪಕ್ಕೆ ಉತ್ತರಿಸಿದ ಡಾ. ಜಿತೇಂದ್ರ ಸಿಂಗ್, ಪ್ರತಿಭಟನೆ ಸಂದರ್ಭದಲ್ಲಿ ಯಾವುದೇ ಗುಂಡು ಹಾರಿಸಲಾಗಿಲ್ಲ ಮತ್ತು ಅಶ್ರುವಾಯು ಮಾತ್ರ ಬಳಸಲಾಗಿದೆ ಎಂದು ಸರ್ಕಾರ ಪದೇ ಪದ ಸ್ಪಷ್ಟಪಡಿಸಿದೆ. ಯಾವುದೇ ಗುಂಡು ಹಾರಿಸಲ್ಲವಾದ್ದರಿಂದ, ಆದೇಶ ಹೊರಡಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. ಏಕೆಂದರೆ ಅಂತಹ ಆದೇಶ ಹೊರಡಿಸುವ ಅಧಿಕಾರ ಸಚಿವರಿಗಿಲ್ಲ, ಮ್ಯಾಜಿಸ್ಟ್ರೇಟ್‌ಗೆ ಮಾತ್ರ ಇದೆ ಎಂದು ಅವರು ವಿವರಿಸಿದರು.

ಚರ್ಚೆಯಲ್ಲಿ ಭಾಗವಹಿಸಿದ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ದೇಶದಲ್ಲಿ ಶಿಕ್ಷಣ ವ್ಯವಸ್ಥೆಯು ಈಗ ತುಂಬಾ ದುಬಾರಿಯಾಗಿದೆ. ನೀಟ್–ಯುಜಿ ಪರೀಕ್ಷೆಯನ್ನು ನಡೆಸಲು ಖರ್ಚು ಮಾಡುವ ಹಣವು ದೇಶದ ಶಿಕ್ಷಣ ಬಜೆಟ್‌ಗಿಂತ ಹೆಚ್ಚಾಗಿದೆ ಎಂದು ಅವರು ಆರೋಪಿಸಿದರು.

ನೀಟ್ ವಿಷಯದ ಕುರಿತು ವಿದ್ಯಾರ್ಥಿಗಳ ಪ್ರತಿಭಟನೆಯು ಹಿಂಸೆ ಅಥವಾ ದ್ವೇಷವಲ್ಲ, ಬದಲಾಗಿ ಯುವಕರ ಆಳವಾದ ಅಭಿವ್ಯಕ್ತಿಯಾಗಿದೆ ಮತ್ತು ಎಲ್ಲಾ ರಾಜಕೀಯ ಪಕ್ಷಗಳು ಈ ಅಭಿವ್ಯಕ್ತಿಯನ್ನು ಗೌರವಿಸಬೇಕು ಎಂದು ಹೇಳಿದರು.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ವಿರುದ್ಧ ರಾಹುಲ್ ಗಾಂಧಿಯವರ ಹೇಳಿಕೆಗಳಿಗೆ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ತಮ್ಮ ಹೇಳಿಕೆಗಳಿಗೆ ರಾಹುಲ್ ಗಾಂಧಿಯವರು ಸದನದಲ್ಲಿ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದರು.

ಚರ್ಚೆಯ ಸಮಯದಲ್ಲಿ ಸದನವು ಎರಡು ಬಾರಿ ತಾತ್ಕಾಲಿಕ ಮುಂದೂಡಲಾಯಿತು. ಮಸೂದೆಯನ್ನು ಅಂಗೀಕರಿಸಿದ ನಂತರ, ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ಸದನವನ್ನು ನಾಳೆ ಬೆಳಗ್ಗೆ 11 ಗಂಟೆಗೆ ಮುಂದೂಡಿದರು.

---

ರಾಜ್ಯಸಭೆಯು ರಾಷ್ಟ್ರೀಯ ಗೌರವಕ್ಕೆ ಅವಮಾನ ತಡೆಗಟ್ಟುವಿಕೆ ತಿದ್ದುಪಡಿ ಮಸೂದೆ, 2026 ಅನ್ನು ಅಂಗೀಕರಿಸಿದೆ. ಈ ಮಸೂದೆಯು 1971 ರ ರಾಷ್ಟ್ರೀಯ ಗೌರವಕ್ಕೆ ಅವಮಾನ ತಡೆಗಟ್ಟುವಿಕೆ ಕಾಯ್ದೆಗೆ ಮತ್ತಷ್ಟು ತಿದ್ದುಪಡಿ ತರುತ್ತದೆ. ಪ್ರಸ್ತಾವಿತ ಶಾಸನವು ವಂದೇ ಮಾತರಂಗೆ ರಾಷ್ಟ್ರಗೀತೆ–ಜನ ಗಣ ಮನ ದಂತೆಯೇ ಶಾಸನಬದ್ಧ ರಕ್ಷಣೆಯನ್ನು ನೀಡಲು ಪ್ರಯತ್ನಿಸುತ್ತದೆ. ಅಪರಾಧಗಳಿಗೆ ಮೂರು ವರ್ಷಗಳವರೆಗೆ ಜೈಲು ಶಿಕ್ಷೆ, ದಂಡ ಅಥವಾ ಎರಡನ್ನೂ ವಿಧಿಸಬಹುದು.

ಮಸೂದೆಯ ಮೇಲಿನ ಚರ್ಚೆಗೆ ಉತ್ತರಿಸಿದ ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ, ಮಸೂದೆಯಲ್ಲಿನ ತಿದ್ದುಪಡಿ ಕೇವಲ ಶಾಸಕಾಂಗ ಬದಲಾವಣೆಯಲ್ಲ. ಇದು ಭಾರತದ ಆತ್ಮ, ರಾಷ್ಟ್ರೀಯ ಪ್ರಜ್ಞೆ, ಸಾಂಸ್ಕೃತಿಕ ಪರಂಪರೆ ಮತ್ತು ಸ್ವಾತಂತ್ರ್ಯ ಹೋರಾಟದ ಆದರ್ಶಗಳಿಗೆ ಸಾಮೂಹಿಕ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು.

1971 ರಲ್ಲಿ, ರಾಷ್ಟ್ರೀಯ ಗೌರವಕ್ಕೆ ಅವಮಾನ ತಡೆಗಟ್ಟುವಿಕೆ ಕಾಯ್ದೆಯ ಮೂಲಕ, ರಾಷ್ಟ್ರಧ್ವಜ, ಸಂವಿಧಾನ ಮತ್ತು ರಾಷ್ಟ್ರಗೀತೆಗೆ ಗೌರವವನ್ನು ಖಚಿತಪಡಿಸಿಕೊಳ್ಳಲು ನಿಬಂಧನೆಗಳನ್ನು ಮಾಡಲಾಗಿದೆ. ವಂದೇ ಮಾತರಂ ಅನ್ನು ಉದ್ದೇಶಪೂರ್ವಕವಾಗಿ ಅವಮಾನಿಸುವುದು ಅಸ್ತಿತ್ವದಲ್ಲಿರುವ ಕಾನೂನಿನಡಿಯಲ್ಲಿ ಶಿಕ್ಷಾರ್ಹವಾಗಿರುತ್ತದೆ ಎಂದು ತಿಳಿಸಿದರು.

ಇದಕ್ಕೂ ಮೊದಲು, ಚರ್ಚೆಯನ್ನು ಪ್ರಾರಂಭಿಸಿದ ಬಿಜೆಪಿ ಸಂಸದ ಡಾ. ರಾಧಾ ಮೋಹನ್ ದಾಸ್ ಅಗರ್ವಾಲ್, ಕಳೆದ 123 ವರ್ಷಗಳಿಂದ ವಂದೇ ಮಾತರಂ ಹಾಡನ್ನು ಅಗೌರವಿಸಲಾಗುತ್ತಿದೆ. ಈ ಹಾಡಿನಿಂದ ಪ್ರೇರಿತರಾಗಿ ದೇಶದ ಕ್ರಾಂತಿಕಾರಿಗಳು ರಾಷ್ಟ್ರಕ್ಕಾಗಿ ತ್ಯಾಗ ಮಾಡಿದ್ದಾರೆ ಎಂದು ಹೇಳಿದರು.

ವೈಎಸ್‌ಆರ್‌ಸಿಪಿ ಯ ಗೊಲ್ಲ ಬಾಬುರಾವ್, ಬಿಜೆಡಿ ಯ ಸುಲತಾ ದೇವ್, ಆಪ್ ನ ಸಂಜಯ್ ಸಿಂಗ್, ಎಐಎಡಿಎಂಕೆ ಯ ಡಾ. ಎಂ.ತಂಬಿದುರೈ ಸೇರಿದಂತೆ ಇತರರು ಚರ್ಚೆಯಲ್ಲಿ ಭಾಗವಹಿಸಿದ್ದರು.

---

ಜನನ ಮತ್ತು ಮರಣ ನೋಂದಣಿ ತಿದ್ದುಪಡಿ ಮಸೂದೆ–2026 ಅನ್ನು ಲೋಕಸಭೆಯಲ್ಲಿ ಇಂದು ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಮಂಡಿಸಿದರು.

1969ರ ಜನನ ಮತ್ತು ಮರಣ ನೋಂದಣಿ ಕಾಯ್ದೆಗೆ ತಿದ್ದುಪಡಿ ತರಲು ಈ ಮಸೂದೆ ಉದ್ದೇಶಿಸಿದೆ. ಜನನ ಅಥವಾ ಮರಣ ಸಂಭವಿಸಿದ ಬಳಿಕ ಒಂದು ವರ್ಷಕ್ಕಿಂತ ಹೆಚ್ಚು, ಆದರೆ ಎರಡು ವರ್ಷಗಳೊಳಗೆ ನೋಂದಣಾಧಿಕಾರಿಗೆ ವರದಿ ಮಾಡಿದರೆ, ಅದರ ಸತ್ಯಾಸತ್ಯತೆ ಪರಿಶೀಲಿಸಿದ ಬಳಿಕ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ ಅಥವಾ ಜಿಲ್ಲಾಧಿಕಾರಿಯಿಂದ

ಅಧಿಕಾರ ಪಡೆದ ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್ ಅವರ ಅನುಮತಿಯೊಂದಿಗೆ ಮಾತ್ರ ನೋಂದಣಿ ಮಾಡಲು ಮಸೂದೆಯಲ್ಲಿ ಅವಕಾಶ ಕಲ್ಪಿಸಲಾಗಿದೆ.

ಎರಡು ವರ್ಷಗಳಿಗಿಂತ ಹೆಚ್ಚು ವಿಳಂಬವಾಗಿ ಜನನ ಅಥವಾ ಮರಣ ವರದಿಯಾದರೆ, ಪ್ರಥಮ ದರ್ಜೆ ನ್ಯಾಯಾಂಗ ದಂಡಾಧಿಕಾರಿ ಅವರ ಆದೇಶದ ಮೇರೆಗೆ ಮಾತ್ರ ನೋಂದಣಿ ಮಾಡಬಹುದಾಗಿದೆ.

ಹಿಂದಿನ ಕಾಯ್ದೆಯಂತೆ ಜನನ ಮತ್ತು ಮರಣ ನೋಂದಣಿ ಕಡ್ಡಾಯವಾಗಿದ್ದು, ಜನನ ಮತ್ತು ಮರಣ ಘಟನೆಗಳ ಸಮಯೋಚಿತ ವರದಿಯನ್ನು ಉತ್ತೇಜಿಸುವುದು ಹಾಗೂ ವಿಳಂಬ ನೋಂದಣಿಗೆ ಸಂಬಂಧಿಸಿದ ನಿಯಮಗಳನ್ನು ಮತ್ತಷ್ಟು ಕಟ್ಟುನಿಟ್ಟುಗೊಳಿಸುವುದು ನೂತನ ಮಸೂದೆಯ ಉದ್ದೇಶವಾಗಿದೆ.

---

ಕಲ್ಲಿದ್ದಲು ನಿಕ್ಷೇಪ ಹಂಚಿಕೆ ಪ್ರಕರಣದಲ್ಲಿ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ವಿರುದ್ಧದ ಕ್ರಿಮಿನಲ್ ಪ್ರಕರಣವನ್ನು ಸುಪ್ರೀಂ ಕೋರ್ಟ್ ಇಂದು ವಿಲೇವಾರಿ ಮಾಡಿದೆ. ಅವರ ವಿರುದ್ಧ ಹೊರಡಿಸಿದ್ದ ಸಮನ್ಸ್ ಆದೇಶವನ್ನೂ ನ್ಯಾಯಾಲಯ ರದ್ದುಗೊಳಿಸಿದೆ.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜಾಯ್ಮಲ್ಯ ಬಾಗ್ಚಿ ಮತ್ತು ವಿ.ಮೋಹನ ಅವರನ್ನೊಳಗೊಂಡ ನ್ಯಾಯಪೀಠ, ಕ್ಲೀನ್ ಚಿಟ್ ನೀಡಿರುವ ಸಿಬಿಐ ಸಲ್ಲಿಸಿದ್ದ ವರದಿಯನ್ನು ಪುರಸ್ಕರಿಸಿ, ಅರ್ಜಿಯನ್ನು ವಿಲೇವಾರಿ ಮಾಡಿದೆ.

---

ಜಮ್ಮು-ಕಾಶ್ಮೀರದಲ್ಲಿ ಆಷಾಢ ಗುರು ಪೂರ್ಣಿಮೆಯ ಅಂಗವಾಗಿ ಪವಿತ್ರ ಗದೆಯನ್ನು ಇಂದು ಶ್ರೀನಗರದ ಮೈಸುಮಾದ ಐತಿಹಾಸಿಕ ದಶನಾಮಿ ಅಖಾಡದಿಂದ ವಿಧಿವತ್ತಾಗಿ ಹೊರತರಲಾಯಿತು.

ಇದರೊಂದಿಗೆ ಪವಿತ್ರ ಶ್ರೀ ಅಮರನಾಥ ಗುಹಾ ದೇಗುಲದ ವಾರ್ಷಿಕ ಯಾತ್ರೆಗೆ ಚಾಲನೆ ದೊರೆತಿದೆ. ಚರ್ಣಿ ಮುಬಾರಕ್‌ನ ಉಸ್ತುವಾರಿ ಮಹಂತ್ ದೀಪೇಂದ್ರ ಗಿರಿ ಅವರ ನೇತೃತ್ವದಲ್ಲಿ ಯಾತ್ರೆ ಆರಂಭಗೊಂಡಿದೆ.

ಪವಿತ್ರ ಛಡಿಯು ಪಹಲ್ಗಾಮ್, ಚಂದನ್ವಾರಿ, ಶೇಷನಾಗ್ ಮತ್ತು ಪಂಚತರಣಿ ಮಾರ್ಗವಾಗಿ ಸಾಗಿ, ಶ್ರಾವಣ ಪೂರ್ಣಿಮೆಯ ರಕ್ಷಾ ಬಂಧನದಂದು ಅಮರನಾಥ ಗುಹಾ ದೇಗುಲ ತಲುಪಲಿದೆ.

---

ಹಾರ್ಮುಜ್ ಜಲಸಂಧಿಯಲ್ಲಿ ಮೇಲಿನ ಇತ್ತೀಚಿನ ದಾಳಿಗಳನ್ನು ಭಾರತ ತೀವ್ರವಾಗಿ ಖಂಡಿಸಿದೆ. ಈ ಪ್ರದೇಶದಲ್ಲಿ ವಾಣಿಜ್ಯ ಸಾಗಣೆ ಮತ್ತು ನಾಗರಿಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ದಾಳಿ ನಡೆಯುವುದು ಕೊನೆಗೊಳ್ಳಬೇಕು ಎಂದು ಭಾರತ ಹೇಳಿದೆ.

ವಿಶ್ವಸಂಸ್ಥೆಗೆ ಭಾರತದ ಖಾಯಂ ಪ್ರತಿನಿಧಿ ಪರ್ವತನೇನಿ ಹರೀಶ್ ಮಾತನಾಡಿ, ಈ ಪ್ರದೇಶದಲ್ಲಿ ನಡೆಯುತ್ತಿರುವ ಸಂಘರ್ಷದಲ್ಲಿ ಸ್ವಲ್ಪ ಸಮಯದ ವಿರಾಮದ ನಂತರ, ದಾಳಿಗಳು ಮತ್ತೆ ಪುನರಾರಂಭಗೊಂಡಿವೆ ಮತ್ತು ಹಗೆತನ ಹೆಚ್ಚಾಗಿದೆ. ಈ ತಿಂಗಳು ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆಯ ಸಮಯದಲ್ಲಿ ಜಿಎಫ್‌ಎಸ್ ಗ್ಯಾಲಕ್ಸಿ, ಎಂಟಿ ಅಲ್ ಬಹಿಯಾ ಮತ್ತು ಎಂಟಿ ಮೊಂಬಾಸಾ ಸೇರಿದಂತೆ ಹಲವಾರು ಹಡಗುಗಳ ಮೇಲಿನ ದಾಳಿಯನ್ನು ಭಾರತ ತೀವ್ರವಾಗಿ ಖಂಡಿಸುತ್ತದೆ ಎಂದು ಹೇಳಿದರು.

ಅಂತಾರಾಷ್ಟ್ರೀಯ ಜಲಮಾರ್ಗಗಳ ಮೂಲಕ ಮುಕ್ತ ಮತ್ತು ಅಡೆತಡೆಯಿಲ್ಲದ ಸಂಚರಣೆ ಹಾಗೂ ವಾಣಿಜ್ಯವನ್ನು ಪುನಃಸ್ಥಾಪಿಸಬೇಕು ಎಂದು ಅವರು ಒತ್ತಾಯಿಸಿದರು.

---

ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಅಶಾಂತಿ ಉಲ್ಬಣಗೊಂಡಿದ್ದು, ಶಾಂತಿಯುತ ಪ್ರತಿಭಟನಾಕಾರರ ಮೇಲೆ ಪಾಕಿಸ್ತಾನಿ ಪಡೆಗಳು ಗುಂಡು ಹಾರಿಸಿವೆ. ಇದರಿಂದಾಗಿ ಇದುವರೆಗೆ ಒಟ್ಟು 40 ಕ್ಕೂ ಹೆಚ್ಚು ನಾಗರಿಕರು ಸಾವನ್ನಪ್ಪಿದ್ದು, 12 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.

ಇದು ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಹೈಕಮಿಷನರ್ ಮಧ್ಯಪ್ರವೇಶಿಸುವಂತೆ ಮಾಡಿದೆ.

ಜಂಟಿ ಅವಾಮಿ ಕ್ರಿಯಾ ಸಮಿತಿಯು ಇದೇ 27 ರಂದು ರಾವಲಕೋಟ್‌ನಿಂದ ಮುಜಫರಾಬಾದ್‌ಗೆ ಆಯೋಜಿಸಿದ್ದ ಶಾಂತಿಯುತ ಪ್ರತಿಭಟನೆಯಲ್ಲಿ ಹತ್ಯೆಗಳಾಗಿವೆ ಎಂದು ಜಮ್ಮು ಕಾಶ್ಮೀರ ಮಾನವ ಹಕ್ಕುಗಳ ಗುಂಪು, ವಿಶ್ವಸಂಸ್ಥೆ ಮಾನವ ಹಕ್ಕುಗಳ ಹೈಕಮಿಷನರ್ ವೋಲ್ಕರ್ ಟರ್ಕ್‌ಗೆ ಮನವಿ ಮಾಡಿದೆ.

---

ಅಸ್ಸಾಂನಲ್ಲಿ ಮಳೆಯಿಂದ ಪ್ರವಾಹದ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ, ಪರಿಹಾರ ಕಾರ್ಯಾಚರಣೆ ಕುರಿತು ಅಸ್ಸಾಂ ಮುಖ್ಯಮಂತ್ರಿ ಡಾ. ಹಿಮಂತ ಬಿಸ್ವಾ ಶರ್ಮಾ ಅವರೊಂದಿಗೆ, ಕೇಂದ್ರ ಗೃಹ ಸಚಿವ ಅಮಿತ್ ಶಾ ಚರ್ಚೆ ನಡೆಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಡಾ. ಹಿಮಂತ ಬಿಸ್ವಾ ಶರ್ಮಾ, ಪ್ರವಾಹ ಬಾಧಿತ ಪ್ರದೇಶಗಳ ಪುನರ್ವಸತಿ ಮತ್ತು ಪರಿಹಾರ ಕಾರ್ಯಾಚರಣೆಗಳಿಗೆ ಕೇಂದ್ರದಿಂದ ಎಲ್ಲ ರೀತಿಯ ನೆರವು ನೀಡುವುದಾಗಿ ಕೇಂದ್ರ ಗೃಹ ಸಚಿವರು ಭರವಸೆ ನೀಡಿದ್ದಾರೆ ಎಂದು ತಿಳಿಸಿದ್ದಾರೆ.

ಇನ್ನೊಂದೆಡೆ, ಒಡಿಶಾದಲ್ಲಿ ಪ್ರವಾಹ ಪರಿಸ್ಥಿತಿ ಮುಂದುವರೆದಿದ್ದು, ನದಿಗಳು ಉಕ್ಕಿ ಹರಿಯುತ್ತಿದ್ದು, ಸಾವಿರಾರು ಜನರನ್ನು ಸ್ಥಳಾಂತರಿಸಲಾಗಿದೆ. ಹಲವಾರು ಜಿಲ್ಲೆಗಳಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿದೆ.

__________ ಮುಕ್ತಾಯ __________